ಇ) ಭಾರತದಲ್ಲಿ ಈಗಾಗಲೇ ಹಲವಾರು ರಾಜ್ಯಗಳಲ್ಲಿ ಮಹಿಳಾ ಅಭಿವೃದ್ಧಿ ನಿಗಮಗಳು ಸ್ಥಾಪಿತಗೊಂಡು ಕಾರ್ಯನಿರ್ವಹಿಸುತ್ತಿವೆ ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು 1987ರಲ್ಲಿ ಸ್ಥಾಪಿತಗೊಂಡಿದ್ದು, ಮಹಿಳೆಯರ ಸಾಮಾಜಿಕ ಹಾಗೂ ಅರ್ಥಿಕ ಸಬಲೀಕರಣಕ್ಕಾಗಿ ಕಾರ್ಯ ನಿರ್ವಹಿಸುತ್ತಿದೆ

204 (22) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ)

ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕೃಷಿ ಬಿತ್ತನೆ ಬೀಜಗಳನ್ನು ಗ್ರಾಮಾಂತರ ಪ್ರದೇಶದ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸುವ ಉದ್ದೇಶ ಸರ್ಕಾರಕ್ಕಿದೆಯೇ ,

ಆ) ಹಾಗಿದ್ದಲ್ಲಿ, ವಿತರಣೆಯಲ್ಲಿ ವಿಳಂಬವಾಗಲು ಕಾರಣವೇನು,

ಇ) ಇಲ್ಲವಾದಲ್ಲಿ, ಸದರಿ ಸಹಕಾರ ಸಂಘಗಳ ಮೂಲಕ ಬೀಜ ವಿತರಿಸುವ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಂಡೆಪ್ಪ ಕಾಶಂಪೂರ

ಅ),ಆ)&ಇ) ಬಿತ್ತನೆ ಬೀಜಗಳನ್ನು ಈಗಾಗಲೇ ಸಹಕಾರಿ ಸಂಘಗಳ ಮೂಲಕವೂ ಸಹ ವಿತರಣೆ ಮಾಡುಲಾಗುತ್ತಿರುವುದರಿಂದ ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ